1) ಸೌಲಭ್ಯ ಪಡೆಯುವ ಅರ್ಜಿ

2) ಜಾತಿ: ಆದಾಯ ಪ್ರಮಾಣ ಪತ್ರ

3) ವಾಸಸ್ಥಳದ ಬಗ್ಗೆ ಧೃಢೀಕರಣಪತ್ರ

4) ವಿವಾಹಕ್ಕೆ ಸಂಬಂಧಿಸಿದ ದಾಖಲೆ: ಲಗ್ನಪತ್ರಿಕೆ

5) ಜನ್ಮ ದಿನಾಂಕದ ದೃಢೀಕರಣ ಪತ್ರ

ನಗರ ಭೂ ಪರಿಮಿತಿ ಕಾನೂನು ರದ್ದತಿ.

1495(2119)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಗರ ಭೂ ಪರಿಮಿತಿ ಕಾನೂನನ್ನು (ಅರ್ಬನ್ ಲ್ಯಾಂಡ್ ಸೀಲಿಂಗ್ ಮತ್ತು ರೆಗ್ಯೂಲರೈಸೇಷನ್ ಆಕ್ಟ್) ಕೇಂದ್ರ ಸರ್ಕಾರ ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ರಾಜ್ಯ ಸರ್ಕಾರದ ಸ್ಪಷ್ಟ ನಿಲುವೇನು?

ಶ್ರೀ ಎಂ.ಎಸ್.ಪಾಟೀಲ್ (ನಗರಾಭಿವೃದ್ಧಿ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈ ಕುರಿತು ಕ್ರಮ ತೆಗೆದುಕೊಳ್ಳುವ ಬಗ್ಗೆ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಸಣ್ಣ ಮತ್ತು ಮಧ್ಯಮ ಪಟ್ಟಣ ಅಭಿವೃದ್ಧಿ ಯೋಜನೆ.

1496(2084)

ಡಾ: ಎಂ.ಪಿ.ಕರ್ಕಿ (ಕುಮಟಾ): ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಐ.ಡಿ.ಎಸ್.ಎಂ.ಟಿ. ಯೋಜನೆಯಲ್ಲಿ ಹೊನ್ನಾವರ ಪಟ್ಟಣ ಪಂಚಾಯತ್ ಮತ್ತು ಕುಮಟಾ ಪುರಸಭೆಯನ್ನು ಸೇರಿಸುವುದು ಅವಶ್ಯ ಎನ್ನುವುದು ಸರ್ಕಾರದ ಗಮಕ್ಕೆ ಬಂದಿದೆಯೇ.

ಆ) ಹಾಗಿದ್ದಲ್ಲಿ ಹೀಗೆ ಸೇರಿಸದಿರುವುದಕ್ಕೆ ಕಾರಣಗಳೇನು.

ಇ) ಸೇರಿಸಲು ಯಾವಾಗ ಕ್ರಮಕೈಗೊಳ್ಳಲಾಗುವುದು.

ಶ್ರೀ ಮಿರಾಜುದ್ದೀನ್ ಎನ್.ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):

ಅ) ಬಂದಿದೆ.

ಆ) ಹೊನ್ನಾವರ ಪಟ್ಟಣವನ್ನು ಸದರಿ ಯೋಜನೆಯಡಿ ಸೇರಿಸಲು ರಾಜ್ಯಮಟ್ಟದ ಆಯ್ಕೆ ಸಮಿತಿ ಆಯ್ಕೆ ಮಾಡಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ. ಒಂದು ವರ್ಷದಲ್ಲಿ 22 ಪಟ್ಟಣಗಳನ್ನು ಆಯ್ಕೆ ಮಾಡಲಾಗಿರುವುದರಿಂದ ಕುಮಟಾ ಪುರಸಭೆಯನ್ನು ಯೋಜನೆಯಡಿ ಸೇರಿಸಿರುವುದಿಲ್ಲ.

ಇ) ಸದ್ಯದಲ್ಲಿಯೆ.

ಶಿಗ್ಗಾಂವ್ ತಾಲ್ಲೂಕು ಬಂಕಾಪುರ ಪಟ್ಟಣ ಪಂಚಾಯತ್ ಆಗಿ ಘೋಷಣೆ.

1497(2086)

ಶ್ರೀ ಕುನ್ನೂರು ಮಂಜುನಾಥ ಚೆನ್ನಪ್ಪ (ಶಿಗ್ಗಾಂ) ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಗ್ಗಾಂವ್ ತಾಲ್ಲೂಕು ಬಂಕಾಪುರ ಪಟ್ಟಣ ಪಂಚಾಯತಿಯನ್ನಾಗಿ ಯಾವಾಗ ಘೋಷಣೆ ಮಾಡಲಾಗವುದು?

ಶ್ರೀ ಮಿರಾಜುದ್ದೀನ್ ಎನ್. ಪಟೇಲ್ (ಪೌರಡಳಿತ ರಾಜ್ಯ ಸಚಿವರು):

ಅ) ಶಿಗ್ಗಾಂವ್ ತಾಲ್ಲೂಕ ಬಂಕಾಪುರವನ್ನು ಪಟ್ಟಣ ಪಂಚಾಯತಿಯನ್ನಾಗಿ ಘೋಷಿಸುವ ಬಗ್ಗೆ ಪ್ರಾಥಮಿಕ ಅಧಿಸೂಚನೆಯನ್ನು ದಿನಾಂಕ 24-5-99 ರಂದು ಸಂಖ್ಯೆ ನಅಇ 380 ಎಂಎಲ್ಆರ್ 97ರಲ್ಲಿ ಹೊರಡಿಸಿದೆ. ಹೊರಡಿಸಿದ 30 ದಿನಗಳ ಒಳಗಾಗಿ ಆಕ್ಷೇಪಣೆಯನ್ನು ಲಿಖಿತ ಮೂಲಕ ಆಹ್ವಾನಿಸಲಾಗಿದೆ. ಆಕ್ಷೇಪಣೆಗಳನ್ನು ಪರಿಶೀಲಿಸಿ ನಂತರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.